## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 1795-2018** **ಸಿ. ಡಬ್ಲುಃ 08**

**ಪಿ. ಡಬ್ಲುಃ 01**

| | |
|---|---|
| ಸಾಕ್ಷಿದಾರರ ಹೆಸರು | ಸತೀಶ್ |
| ತಂದೆ/ಗಂಡನ ಹೆಸರು | ಎನ್.ಆರ್.ರಂಗಸ್ವಾಮಿ |
| ವಯಸ್ಸು | 49 ವರ್ಷ |
| ಕೆಲಸ | ವ್ಯಾಪಾರ |
| ವಾಸ | ನಂಜನಗೂಡು. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 31-01-2024** |

**ಮುಖ್ಯ ವಿಚಾರಣೆಃ ಶ್ರೀ. ಎಪಿಪಿ ವಕೀಲರಿಂದಃ**

ಮೃತ ಅಂಜು ಮತ್ತು ಚಾಸಾ-1 ನನಗೆ ಪರಿಚಯ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಸ್ಥಳ ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-1 ಕ್ಕೆ ಪೊಲೀಸರ ಕೋರಿಕೆ ಮೇರೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-1 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಘಟನಾ ಸ್ಥಳವನ್ನು ತೋರಿಸಿರುವುದಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಯಾವುದೇ ಹೇಳಿಕೆ ಪಡೆದಿಲ್ಲ. ಈ ಪ್ರಕರಣದ ವಿಧ್ಯಮಾನ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**ಪಾಟೀ ಸವಾಲುಃ ಶ್ರೀ. ಎಪಿಪಿ ಯವರಿಂದ**

ದಿಃ19-08-2018 ರಂದು ಬೆಳಗ್ಗೆ 10.30 ಸಮಯದಲ್ಲಿ ನಾನು ನನ್ನ ಕೆಲಸದ ನಿಮಿತ್ತ ನಂಜನಗೂಡಿನ ಸರ್ಕಾರಿ ಆಸ್ಪತ್ರೆ ಬಳಿ ಹೋಗಲು ಮನೆಯಿಂದ ನನ್ನ ಮೋಟಾರ್ ಸೈಕಲ್ ಅನ್ನು ಚಾಲನೆ ಮಾಡಿಕೊಂಡು ನಂಜನಗೂಡು ಚಾಮರಾಜನಗರ ಮುಖ್ಯ ರಸ್ತೆಯಲ್ಲಿ ಇರುವ ಹೊಸದಾದ ಕೆ.ಎಸ್.ಆರ್.ಟಿ. ಬಸ್ ನಿಲ್ದಾಣ ಬಳಿ ಹೋಗುತ್ತಿದ್ದಾಗ ಸದರಿ ಬಲ್ ನಿಲ್ದಾಣದ ಹೊರಗೆ ಬರುವ ಗೇಟ್ ಮುಂಭಾಗ ಸದರಿ ಬಸ್ ನಿಲ್ದಾಣದ ಕಡೆಗೆ ಪಕ್ಕದಲ್ಲಿರು ಕೆ.ಎಸ್.ಆರ್.ಟಿ. ಡಿಪೋ ಕಡೆ ಹೋಗಲು ಒಂದು ಕೆ.ಎಸ್.ಆರ್.ಟಿ. ಬಸ್ಸು ಅದರ ಚಾಲಕ ಬಸ್ಸನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಓಡಿಸಿಕೊಂಡು ಬರುತ್ತಿದ್ದಾಗ ರಸ್ತೆಯ ಎಡಭಾಗ ಖಾಸಗಿ ನಿಲ್ದಾಣದ ಕಡೆಯಿಂದ ಅಪೋಲೋ ಸರ್ಕಲ್ ಕಡೆಗೆ ನಡೆದುಕೊಂಡು ಹೋಗುತ್ತಿದ್ದ ಒಬ್ಬ ಪಾದಾಚಾರಿಗೆ ಬಸ್ಸಿನ ಎಡ ಭಾಗದ ಬಾಡಿಯಿಂದ ತಗುಲಿದ್ದು ಆತ ಕೆಳಕ್ಕೆ ಬಿದ್ದಾಗ ಬಸ್ಸಿನ ಹಿಂಭಾಗದ ಎಡಭಾಗದ ಚಕ್ರ ಆತನ ತಲೆ ಮೇಲೆ ಹರಿದಿದ್ದನ್ನು ನಾನು ಕಣ್ಣಾರೆ ನೋಡಿರುತ್ತೇನೆ ಎಂದರೆ ಸರಿಯಲ್ಲ. ತಕ್ಷಣ ನಾನು ಸ್ಥಳಕ್ಕೆ ಹೋಗಿ ನೋಡಲಾಗಿ ಆತ ನನಗೆ ಪರಿಚಯ ಇದ್ದ ನಂಜನಗೂಡು ಪಟ್ಟಣದ ಕಾಯಿ ಅಂಗಡಿ ಬೀದಿಯ ಇಂದ್ರ ರವರ ತಮ್ಮ ಲೇ.ರಂಗಸ್ವಾಮಿ ರವರ ಮಗ ಅಂಜು ಎಂದು ತಿಳಿಯಿತು ಎಂದರೆ ಸರಿಯಲ್ಲ. ಆತನ ತಲೆ ಭಾಗಾಂಶ ಜಜ್ಜಿ ಹೋಗಿದ್ದು ಸ್ಥಳದಲ್ಲಿಯೇ ಮೃತಪಟ್ಟಿದ್ದನು ಎಂದರೆ ಸರಿಯಲ್ಲ. ಅಪಘಾತ ಮಾಡಿದ ಕೆ.ಎಸ್.ಆರ್.ಟಿ. ಬಸ್ಸಿನ ನಂಬರ್ ನೋಡಲಾಗಿ ಕೆಎ-10-ಎಫ್-0209 ಆಗಿತ್ತು ಎಂದರೆ ಸರಿಯಲ್ಲ. ನಂತರ ಸ್ಥಳಕ್ಕೆ ಸಾರ್ವಜನಿಕರು ಬಂದಿದ್ದದನ್ನು ನೋಡಿ ಬಸ್ಸನ್ನು ಅದರ ಚಾಲಕ ನಿಲ್ಲಿಸದೇ ಹೊರಟು ಹೋದನು ಎಂದರೆ ಸರಿಯಲ್ಲ. ತಕ್ಷಣ ನಾನು ಇಂದ್ರ ರವರ ಮನೆಗೆ ಬಂದು ಅಪಘಾತದ ವಿಚಾರವನ್ನು ತಿಳಿಸಿ ಜೊತೆಯಲ್ಲಿ ಅವರನ್ನು ಕರೆದುಕೊಂಡು ಬಂದು ತೋರಿಸಿದೆನು ಎಂದರೆ ಸರಿಯಲ್ಲ. ನಂತರ ಎಲ್ಲರೂ ಸೇರಿ ಮೃತನ ಶವವನ್ನು ನಂಜನಗೂಡು ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ಸಾಗಿಸಿದೆವು ಎಂದರೆ ಸರಿಯಲ್ಲ. ನಂತರ ಚಾಸಾ-1 ರವರು ಅಪಘಾತದ ಸಂಬಂಧ ದೂರು ನೀಡಿರುವ ವಿಚಾರ ಗೊತ್ತಾಯಿತು ಎಂದರೆ ಸರಿಯಲ್ಲ. ಪೊಲೀಸರು ಸ್ಥಳಕ್ಕೆ ಬಂದಾಗ ನಾನು ಅವರಿಗೆ ಘಟನಾ ಸ್ಥಳವನ್ನು ತೋರಿಸಿ ಮಹಜರಿಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ದಿ.20-08-2018 ರಂದು ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ. ನಾನು ನನ್ನ ಹೇಳಿಕೆಯಲ್ಲಿ ದಿ.19-08-2018________________________________ಮತ್ತೆ ನೋಡಿದರೆ ಗುರುತಿಸುತ್ತೇನೆ ಎಂದು ಮೇಲೆ ಓದಿ ಹೇಳಲಾದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗೆಳೆದ ಹೇಳಿಕೆ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-1 ರಂತೆ ಆರೋಪಿ ವಿರುದ್ಧ ದೂರು ನೀಡಿದ್ದರು ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ದಿ.20-08-2018 ಪೊಲೀಸರು ನನ್ನನ್ನು ಮತ್ತು ಚಾಸಾ-12 ಮತ್ತು 13 ರವರನ್ನು ಬರಮಾಡಿಕೊಂಡು ಕೇಸಿನ ವಿಧ್ಯಮಾನ ತಿಳಿಸಿ ನಾನು ಕೃತ್ಯ ಸ್ಥಳವನ್ನು ತೋರಿದ ಮೇರೆಗೆ ಬೆಳಗ್ಗೆ 8.00 ರಿಂದ 8.45 ವರೆಗೆ ನಿಪಿ-1 ರಂತೆ ಮಹಜರ್ ಕ್ರಮ ಜರುಗಿಸಿದರು ಎಂದರೆ ಸರಿಯಲ್ಲ ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**